# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು-3

ಸಂಖ್ಯೆ:ಎ1/ವಿಸಪ/ಪ.ಕಾ/72/2019 ದಿನಾಂಕ:14-03-2019

## ಜ್ಞಾಪನ

**ವಿಷಯ:** 2019 ನೇ ಮೇ ಮಾಹೆಯಲ್ಲಿ ನಡೆಯಲಿರುವ ವಿಶೇಷ ಸಂಗೀತ/ನೃತ್ಯ ಮತ್ತು ತಾಳವಾದ್ಯ ಪರೀಕ್ಷೆಗಳಿಗೆ ಅಭ್ಯರ್ಥಿಗಳಿಂದ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಲು ದಿನಾಂಕವನ್ನು ವಿಸ್ತರಿಸಿರುವ ಕುರಿತು.

**ಉಲ್ಲೇಖ:** 1) ಅಧಿಸೂಚನೆ ಸಂಖ್ಯೆ:ಎ1/ವಿಸಪ/ಪ.ಕಾ/72/2019 ದಿನಾಂಕ:20-02-2019

*****

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಲ್ಲಿ ನೋಂದಾಯಿಸಲ್ಪಟ್ಟು, ಸಂಕೇತ ಸಂಖ್ಯೆ ಹೊಂದಿರುವ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಶಿಕ್ಷಕರಿಂದ (ಶಾಲೆಗಳಿಂದ) ತಾವು ಬೋಧಿಸುತ್ತಿರುವ ಅಭ್ಯರ್ಥಿಗಳಿಗೆ ಹಾಗೂ ಖಾಸಗಿ ಅಭ್ಯರ್ಥಿಗಳಿಂದ ಮಂಡಳಿಯು ನಿಗದಿಪಡಿಸಿದ ಪರೀಕ್ಷಾ ಕೇಂದ್ರಗಳ ಮೂಲಕ ಮೇ-2019ನೇ ಸಾಲಿನಲ್ಲಿ ನಡೆಸಲಿರುವ ಶಾಸ್ತ್ರೀಯ ಸಂಗೀತ (ಕರ್ನಾಟಕ/ಹಿಂದೂಸ್ತಾನಿ) ಭರತನಾಟ್ಯ/ಕೂಚುಪುಡಿ/ಕಥಕ್ ಮತ್ತು ತಾಳವಾದ್ಯ (ಕರ್ನಾಟಕ/ಹಿಂದೂಸ್ತಾನಿ) ಪರೀಕ್ಷೆಗಳಿಗೆ ಅಭ್ಯರ್ಥಿಗಳಿಂದ **ಆನ್‌ಲೈನ್‌ನಲ್ಲಿ** ಅರ್ಜಿಗಳನ್ನು ಸಲ್ಲಿಸಲು ದಿನಾಂಕ:01.03.2019 ರಿಂದಲೇ ಪ್ರಾರಂಭಿಸಲಾಗಿದೆ. ಪರೀಕ್ಷಾ ಕೇಂದ್ರದವರು ಮತ್ತು ಸಂಗೀತ, ನೃತ್ಯ ಹಾಗೂ ತಾಳವಾದ್ಯ ಶಿಕ್ಷಕರು ಅರ್ಜಿಗಳನ್ನು ಸಲ್ಲಿಸಲು ದಿನಾಂಕವನ್ನು ವಿಸ್ತರಿಸಲು ಕೋರಿರುವುದರಿಂದ ಈ ಕೆಳಕಂಡಂತೆ ದಿನಾಂಕವನ್ನು ವಿಸ್ತರಿಸಲಾಗಿದೆ.

| ವಿವರಗಳು | ಮೊದಲು ಇದ್ದ ದಿನಾಂಕ | ವಿಸ್ತರಣಾ ದಿನಾಂಕ |
|---|---|---|
| **ಪರೀಕ್ಷಾ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ:** | **01.03.2019** | --- |
| **ಪರೀಕ್ಷಾ ಕೇಂದ್ರಗಳಲ್ಲಿ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ** | **15.03.2019** | **22.03.2019** |
| **ಪರೀಕ್ಷಾ ಕೇಂದ್ರಗಳಲ್ಲಿ ಅಭ್ಯರ್ಥಿಗಳಿಂದ ದಂಡ ಶುಲ್ಕದೊಂದಿಗೆ ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ** | **20.03.2019** | **29.03.2019** |
| **ಪರೀಕ್ಷಾ ಕೇಂದ್ರದವರು ಶುಲ್ಕ ಪಾವತಿಸಿದ ಬಗ್ಗೆ ಮೂಲ ಬ್ಯಾಂಕ್ ಚಲನ್‌ಗಳು, ಎಂ.ಎಸ್.ಎ. ಗಳು ಮತ್ತು ಕಂಪ್ಯೂಟರಿನಲ್ಲಿ ಮುದ್ರಿಸಿಕೊಂಡ ವಿದ್ಯಾರ್ಥಿಗಳ ವಿವಿಧ ವಿವರಗಳ ನಮೂನೆಗಳನ್ನು ಮಂಡಳಿಗೆ ರವಾನಿಸುವ ಕೊನೆಯ ದಿನಾಂಕ** | **23.03.2019** | **02.04.2019** |

- **ದಂಡ ರಹಿತವಾಗಿ ಅರ್ಜಿ ಸ್ವೀಕರಿಸುವ ಕೊನೆಯ ದಿನಾಂಕ:22.03.2019 ರ ನಂತರ ಬಂದ ಅಭ್ಯರ್ಥಿಗಳಿಗೆ ಒಂದು ದಿನಕ್ಕೆ, ಒಂದು ಅಭ್ಯರ್ಥಿಗೆ ರೂ 150/- ರಂತೆ ದಂಡ ಶುಲ್ಕ ಲೆಕ್ಕಾಚಾರ ಮಾಡಿ ಪರೀಕ್ಷಾ ಶುಲ್ಕದೊಂದಿಗೆ ಪಾವತಿಸುವುದು.**

(ಕೆ.ಎಸ್. ಮಣಿ)
**ನಿರ್ದೇಶಕರು**
(ಇತರೆ ಪರೀಕ್ಷೆಗಳು)

**ಇವರಿಗೆ:**

1) ರಾಜ್ಯದ ಎಲ್ಲಾ ಸಂಗೀತ/ನೃತ್ಯ/ತಾಳವಾದ್ಯ ಪರೀಕ್ಷಾ ಕೇಂದ್ರದ ಮುಖ್ಯಸ್ಥರುಗಳಿಗೆ ಸೂಕ್ತ ಕ್ರಮಕ್ಕಾಗಿ.
2) ರಾಜ್ಯದ ಎಲ್ಲಾ ಸಂಗೀತ/ನೃತ್ಯ/ತಾಳವಾದ್ಯ ಶಾಲಾ/ಸಂಸ್ಥೆಗಳ ಮುಖ್ಯಸ್ಥರುಗಳಿಗೆ ಸೂಕ್ತ ಕ್ರಮಕ್ಕಾಗಿ
3) ಹಿರಿಯ ಸಹಾಯಕ ನಿರ್ದೇಶಕರು, ಸಂಗೀತ/ನೃತ್ಯ ವಿಭಾಗ, ಆಯುಕ್ತರ ಕಛೇರಿ, ಬೆಂಗಳೂರು ಇವರಿಗೆ ಮಾಹಿತಿಗಾಗಿ
4) ವಿಭಾಗೀಯ ಅಧೀಕ್ಷಕರು, ಮೈಸೂರು/ಬೆಂಗಳೂರು/ಬೆಳಗಾಂ/ಗುಲ್ಬರ್ಗ ವಿಭಾಗ, ಸಹನಿರ್ದೇಶಕರ ಕಛೇರಿ, ಇವರುಗಳಿಗೆ ಮಾಹಿತಿಗಾಗಿ.
5) ಹಿರಿಯ ಸಹಾಯಕ ನಿರ್ದೇಶಕರು, ಗಣಕ ಶಾಖೆ ಇವರಿಗೆ ಅಂತರ್ಜಾಲದಲ್ಲಿ ಪ್ರಕಟಿಸಲು ಮತ್ತು ಮುಂದಿನ ಕ್ರಮಕ್ಕಾಗಿ.
6) ಕಛೇರಿ ಪ್ರತಿ.

**ಪ್ರತಿಯನ್ನು ಗೌರವಪೂರ್ವಕವಾಗಿ:-**

1. ಮಾನ್ಯ ಪ್ರಧಾನ ಕಾರ್ಯದರ್ಶಿಗಳು(ಪ್ರಾಥಮಿಕ ಮತ್ತು ಪ್ರೌಢ), ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಮಾನ್ಯ ಆಯುಕ್ತರು ಹಾಗೂ ಅಧ್ಯಕ್ಷರು, ಕ.ಪ್ರೌ.ಶಿ.ಪ. ಮಂಡಳಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.